18

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶಿವಮೊಗ್ಗ ಕೃಷಿ ಮತ್ತು ತೋಟಗಾರಿಕಾ ವಿಶ್ವವಿದ್ಯಾಲಯಕ್ಕೆ 2013-14ನೇ ಸಾಲಿನಲ್ಲಿ ಪರಿಷ್ಕೃತ ಆಯವ್ಯಯದಂತೆ 1ಮತ್ತು 2ನೇ ತ್ರೈಮಾಸಿಕ ಯೋಜನೇತರ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ:-** 1) ದಿನಾಂಕ: 12-07-2013ರ ಪರಿಷ್ಕೃತ ಆಯವ್ಯಯ.
2) ಹಣಕಾಸು ನಿಯಂತ್ರಣಾಧಿಕಾರಿಗಳು, ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ಶಿವಮೊಗ್ಗ ಇವರ ದಿನಾಂಕ: 24-07-2013ರ ಪತ್ರ ಸಂಖ್ಯೆ: ಹನಿಅ/ಕೃತೋವಿಶಿ /192/2013-14.

**** *** ****

**ಪ್ರಸ್ತಾವನೆ:-**

2013-14ನೇ ಸಾಲಿನ ಆಯವ್ಯಯದಲ್ಲಿ ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ಶಿವಮೊಗ್ಗಕ್ಕೆ ಯಾವುದೇ ಯೋಜನೇತರ ಅನುದಾನವನ್ನು ನಿಗದಿಗೊಳಿಸಿರುವುದಿಲ್ಲ. ದಿನಾಂಕ: 12-07-2013ರಂದು ಮಾನ್ಯ ಮುಖ್ಯ ಮಂತ್ರಿಯವರು 2013-14ನೇ ಸಾಲಿಗೆ ಹೊಸ ಆಯವ್ಯಯ ಭಾಷಣವನ್ನು ಮಂಡಿಸಿರುತ್ತಾರೆ. ಅದರಂತೆ ಮೇಲೆ ಓದಲಾದ-1ರಲ್ಲಿ, ಶಿವಮೊಗ್ಗ ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯಕ್ಕೆ ಯೋಜನೇತರ ಅನುದಾನವಾಗಿ ಲೆಕ್ಕಶೀರ್ಷಿಕೆ 2415-80-277-05-01-101ರಡಿಯಲ್ಲಿ ರೂ. 3258.00 ಲಕ್ಷಗಳನ್ನು ನಿಗಧಿಪಡಿಸಿದೆ. ಮೇಲೆ ಓದಲಾದ(2)ರ ದಿನಾಂಕ: 24-07-2013ರ ಪತ್ರದಲ್ಲಿ ಶಿವಮೊಗ್ಗ ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯವು ದಿನಾಂಕ: 21-09-2012ರಲ್ಲಿ ಸ್ಥಾಪಿತಗೊಂಡಿದ್ದು, ದಿನಾಂಕ: 01-04-2013ರಿಂದಲೇ ಕಾರ್ಯನಿರ್ವಹಿಸುತ್ತಿದೆ. ಬೆಂಗಳೂರು ಕೃಷಿ ವಿಶ್ವವಿದ್ಯಾಲಯ ಮತ್ತು ಬಾಗಲಕೋಟೆ ತೋಟಗಾರಿಕೆ ವಿಶ್ವವಿದ್ಯಾಲನಿಯಲಕ್ಕೆ ಒಳಪಟ್ಟಿದ್ದ, ಏಳು ಜಿಲ್ಲೆಗಳಲ್ಲಿನ ಸಂಸ್ಥೆಗಳು ದಿನಾಂಕ: 31-03-2013ಕ್ಕೆ ಈ ವಿಶ್ವವಿದ್ಯಾಲಯಕ್ಕೆ ಹಸ್ತಾಂತರಗೊಂಡಿದ್ದು, ದಿನಾಂಕ: 01-04-2013ರಿಂದ ಸದರಿ ಸಂಸ್ಥೆ ಹಾಗೂ ಕಛೇರಿಗಳ ಸಿಬ್ಬಂದಿಗೆ ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯದಿಂದ ವೇತನ ಮತ್ತು ಭತ್ಯೆ ಪಾವತಿ ಮಾಡಬೇಕಾಗಿದೆ.

ದಿನಾಂಕ: 12-07-2013ರಲ್ಲಿ ಪ್ರಕಟಗೊಂಡ ಆಯವ್ಯಯದಂತೆ ಯೋಜನೇತರ ಲೆಕ್ಕ ಶೀರ್ಷಿಕೆ 2415-80-277-05-01-101ರಡಿಯಲ್ಲಿ ರೂ. 3258.00 ಲಕ್ಷಗಳನ್ನು ಸಹಯಾನುದಾನ-ವೇತನಗಳು ಉದ್ದೇಶಕ್ಕಾಗಿ ಹಂಚಿಕೆ ಮಾಡಿರುವುದಕ್ಕೆ ಧನ್ಯವಾದಗಳನ್ನು ಅರ್ಪಿಸುತ್ತಾ, ತ್ರೈಮಾಸಿಕ ಅನುದಾನಗಳಂತೆ ಪ್ರತಿ ತ್ರೈಮಾಸಿಕಕ್ಕೆ ರೂ. 814.50 ಲಕ್ಷಗಳನ್ನು ಬಿಡುಗಡೆ ಮಾಡಬೇಕಾಗಿರುತ್ತದೆ. ಈಗ ಜುಲೈ

...2

ತಿಂಗಳೂ ಮುಗಿಯುತ್ತಿರುವುದರಿಂದ 1 ಮತ್ತು 2ನೇ ತ್ರೈಮಾಸಿಕಗಳ ಬಾಬ್ತು (ರೂ. 814.50+814.50) ರೂ. 1629.00 ಲಕ್ಷಗಳನ್ನು ಯೋಜನೇತರ ಉದ್ದೇಶಕ್ಕಾಗಿ ಶೀಘ್ರವಾಗಿ ಬಿಡುಗಡೆ ಮಾಡಿ ಆದೇಶ ಹೊರಡಿಸಬೇಕೆಂದು ಹಣಕಾಸು ನಿಯಂತ್ರಣಾಧಿಕಾರಿಗಳು, ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ಶಿವಮೊಗ್ಗ ಇವರು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಸರ್ಕಾರದ ಮಟ್ಟದಲ್ಲಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕೃಇ 20 ಕೃವಿಶಿ 2013, ಬೆಂಗಳೂರು, ದಿನಾಂಕ: 30-08-2013**

ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ಶಿವಮೊಗ್ಗಕ್ಕೆ 2013-14ನೇ ಸಾಲಿನ ಪರಿಷ್ಕೃತ ಆಯವ್ಯಯದಲ್ಲಿ ನಿಗದಿಯಾಗಿರುವ ಯೋಜನೇತರ ಅನುದಾನ ರೂ. 3258.00 ಲಕ್ಷಗಳಲ್ಲಿ ಮೊದಲನೇ ಹಾಗೂ ಎರಡನೇ ತ್ರೈಮಾಸಿಕ ಅನುದಾನ (ರೂ. 814.50+814.50=1629.00) ಸೇರಿದಂತೆ ಒಟ್ಟು ರೂ. 1629.00 (ರೂ. ಒಂದು ಸಾವಿರದ ಆರು ನೂರ ಇಪ್ಪತ್ತೊಂಭತ್ತು ಲಕ್ಷಗಳು ಮಾತ್ರ) ಲಕ್ಷಗಳನ್ನು ಲೆಕ್ಕ ಶೀರ್ಷಿಕೆ-2415-80-277-05-01-101ರಡಿ 1ನೇ ಮತ್ತು 2ನೇ ತ್ರೈಮಾಸಿಕ ಅನುದಾನವಾಗಿ ವೇತನ ಮತ್ತು ಇತರ ಭತ್ಯೆಗಳನ್ನು ಭರಿಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಬಿಡುಗಡೆ ಮಾಡಲಾಗಿದೆ.

- ಪ್ರತಿ ತ್ರೈಮಾಸಿಕ ಅನುದಾನವನ್ನು ಆಯಾ ತ್ರೈಮಾಸಿಕದ ಬಳಕೆ ಪ್ರಮಾಣ ಪತ್ರವನ್ನು ಒದಗಿಸಿ ಬಿಲ್ಲಿಗೆ ಮೇಲು ರುಜು ಪಡೆಯತಕ್ಕದ್ದು.
- ಸರ್ಕಾರವು ಯಾವ ಉದ್ದೇಶಕ್ಕಾಗಿ ಅನುದಾನ ಬಿಡುಗಡೆ ಮಾಡುವುದೋ ಅದೇ ಉದ್ದೇಶಕ್ಕಾಗಿ ಅನುದಾನವನ್ನು ಉಪಯೋಗಿಸತಕ್ಕದ್ದು.
- ಸರ್ಕಾರವು ನೀಡಿದ ಸೂಚನೆ ಆದೇಶಗಳನುಸಾರ ಕೃಷಿ ವಿಶ್ವವಿದ್ಯಾಲಯದವರು ವೆಚ್ಚದಲ್ಲಿ ಕಟ್ಟುನಿಟ್ಟಾಗಿ ಮಿತವ್ಯಯವನ್ನು ಪಾಲಿಸತಕ್ಕದ್ದು.
- ಬಿಡುಗಡೆಯಾಗಿರುವ ಅನುದಾನದ ಬಗ್ಗೆ ಸೂಕ್ತ ಸಮಯದಲ್ಲಿ ಮಹಾಲೇಖಪಾಲರ ಲೆಕ್ಕಗಳೊಂದಿಗೆ ಹೊಂದಾಣಿಕೆ ಮಾಡಿಕೊಳ್ಳತಕ್ಕದ್ದು.
- ಬಿಡುಗಡೆ ಮಾಡಲಾಗಿರುವ ಅನುದಾನವು ಆರ್ಥಿಕ ಪರಿಸ್ಥಿತಿಯನ್ನು ಅನುಸರಿಸಿ ಆರ್ಥಿಕ ಇಲಾಖೆಯು ನೀಡಬಹುದಾದ ಸೂಚನೆಗಳಿಗೆ ಒಳಪಟ್ಟಿರುತ್ತದೆ.
- ಆಯಾ ತಿಂಗಳಿಗೆ ಪ್ರತ್ಯೇಕ ಬಿಲ್ಲನ್ನು ಒದಗಿಸುವುದು.

...3

2. ಬಿಡುಗಡೆಯಾಗಿರುವ ಅನುದಾನಕ್ಕೆ ಹಣಕಾಸು ನಿಯಂತ್ರಣಾಧಿಕಾರಿಗಳು, ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ಶಿವಮೊಗ್ಗ, ಇವರು ಸಲ್ಲಿಸುವ ಬಿಲ್ಲಿಗೆ ಮೇಲು ರುಜು ಮಾಡುವ ಅಧಿಕಾರವನ್ನು ಜಂಟಿ ಕೃಷಿ ನಿರ್ದೇಶಕರು, ಕೃಷಿ ಇಲಾಖೆ, ಶಿವಮೊಗ್ಗ, ಇವರಿಗೆ ನೀಡಲಾಗಿದೆ.

3. ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 1 ಟಿಎಫ್‌ಪಿ 2013, ದಿನಾಂಕ: 10-05-2013ರಲ್ಲಿ ಆಡಳಿತಾತ್ಮಕ ಇಲಾಖಾ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಲಾದ ಆರ್ಥಿಕ ಅಧಿಕಾರ ಮತ್ತು ಇಲಾಖೆಯ ಆಂತರಿಕ ಆರ್ಥಿಕ ಸಲಹೆಗಾರರ ದಿನಾಂಕ: 23-08-2013ರ ಟಿಪ್ಪಣಿ ಸಂಖ್ಯೆ: ಕೃಇ 149 ಆಂಆಸ 2013ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಈ ಆದೇಶವನ್ನು ಹೊರಡಿಸಲಾಗಿದೆ.

**ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ**
**ಮತ್ತು ಅವರ ಹೆಸರಿನಲ್ಲಿ**

**(ಜೆ.ಆರ್. ವಿಶ್ವನಾಥಾಚಾರ್)**
**ಸರ್ಕಾರದ ಅಧೀನ ಕಾರ್ಯದರ್ಶಿ**
**ಕೃಷಿ ಇಲಾಖೆ (ಯೋಜನೆ)**
**(ದೂರವಾಣಿ 080-2203 2388)**

**ಇವರಿಗೆ:-**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ ಬೆಂಗಳೂರು – ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಿ, ಪ್ರಕಟಿತ 15 ಪ್ರತಿಗಳನ್ನು ಒದಗಿಸಲು.

**ಪ್ರತಿ:-**

1. ಮಹಾಲೇಖಪಾಲರು, ಕರ್ನಾಟಕ, (ಲೆಕ್ಕಪತ್ರ/ತನಿಖೆ) ಬೆಂಗಳೂರು.
2. ವಿಶೇಷಾಧಿಕಾರಿಗಳು, ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ಶಿವಮೊಗ್ಗ.
3. ಕೃಷಿ ಆಯುಕ್ತರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು.
4. ಜಂಟಿ ಕೃಷಿ ನಿರ್ದೇಶಕರು, ಕೃಷಿ ಇಲಾಖೆ, ಶಿವಮೊಗ್ಗ.
5. ಜಿಲ್ಲಾ ಖಜಾನಾಧಿಕಾರಿಗಳು, ಶಿವಮೊಗ್ಗ ಜಿಲ್ಲೆ, ಶಿವಮೊಗ್ಗ.
6. ಹಣಕಾಸು ನಿಯಂತ್ರಣಾಧಿಕಾರಿಗಳು, ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ಶಿವಮೊಗ್ಗ.
7. ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4 & 5), ವಿಧಾನ ಸೌಧ, ಬೆಂಗಳೂರು.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.